**ಪ್ರಧಾನ ಸಿವಿಲ್** ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,
**ಮೂಡಿಗೆರೆ**

**ಸಿ.ಸಿ. ಸಂಖ್ಯೆಃ 1622/2023**

**ಪಿರ್ಯಾದಿ** ಃ ಶ್ರೀ ಬಿ.ಕೆ ಪ್ರಸನ್ನಕುಮಾರ್,
ಬಿನ್ ದಿಃ ಬಿ.ಪಿ.ಕೃಷ್ಣೇಗೌಡ,
ವಯಸ್ಸು ಸುಮಾರು 61 ವರ್ಷ,
ವಾಸಃ ಬಕ್ಕಿ ಗ್ರಾಮ, ಬೆಟ್ಟಗೆರೆ ಅಂಚೆ,
ಬಣಕಲ್ ಹೋಬಳಿ, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

**ವಿರುದ್ಧ**

**ಆರೋಪಿ** ಃ ಶ್ರೀಮತಿ ಹೆಚ್.ಎಲ್ ವಿಂಧ್ಯಾ
ಬಿನ್ ಲಕ್ಷ್ಮಣಗೌಡ,
ವಯಸ್ಸು ಸುಮಾರು 40 ವರ್ಷ,
ವಾಸಃ ಹಳ್ಳಿಬೈಲು, ಗುತ್ತಿ ಗ್ರಾಮ ಮತ್ತು ಅಂಚೆ,
ಚಿಕ್ಕಮಗಳೂರು ಜಿಲ್ಲೆ.

## ಆಪಾದನೆಯ ಸಾರಾಂಶ

ನಾನು ಶ್ರೀ ಸಚಿನ್.ಡಿ, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ನಿಮ್ಮ ಕುಟುಂಬದ ತುರ್ತು ಹಣದ ಅವಶ್ಯಕತೆಗಳಿಗೋಸ್ಕರ ಫಿರ್ಯಾದಿಯನ್ನು ಸಂಪರ್ಕಿಸಿ, ದಿನಾಂಕ 02.06.2023 ರಂದು ರೂ.50,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಸಾಲದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಬ್ಯಾಂಕ್ ಆಫ್ ಬರೋಡಾ, ಮೂಡಿಗೆರೆ ಶಾಖೆಯ ಚೆಕ್ ಸಂಖ್ಯೆ000007, ದಿನಾಂಕ 04.09.2023, ರೂ.50,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿರುವುದಿಲ್ಲ (Funds insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 13.09.2023 ರಂದು ನೋಟೀಸ್

ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ದಿನಾಂಕ 18.01.2024 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

Sd/-

ಮೂಡಿಗೆರೆ
ದಿನಾಂಕಃ 18.01.2024

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.